ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆ ಬಗ್ಗೆ

ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜು)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

739 (805) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ರಿಂಗ್ ರಸ್ತೆಯ ಒಳಗಿನ ಎಲ್ಲಾ ಪ್ರದೇಶಗಳು ಹಾಗೂ ಗ್ರಾಮ ಪಂಚಾಯಿತಿಗಳು, ಗ್ರಾಮ ಪಂಚಾಯಿತಿಗೆ ಸೇರಿದ ಪ್ರದೇಶಗಳನ್ನು ಸೇರಿಸಿ, ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆಗೆ ಕ್ರಮ ತೆಗೆದುಕೊಳ್ಳಲಾಗುವುದೇ; (ವಿವರಗಳನ್ನು ಒದಗಿಸುವುದು)

(ಆ) ಆದಷ್ಟು ಬೇಗ ಬೃಹತ್ ಮೈಸೂರು ಮಹಾನಗರ ಪಾಲಿಕೆಯನ್ನು ರಚನೆ ಮಾಡುವ ಮೂಲಕ ಮೈಸೂರು ನಗರದ ಸುವ್ಯವಸ್ಥಿತ ಬೆಳವಣಿಗೆ ಕ್ರಮ ತೆಗೆದುಕೊಳ್ಳಲಾಗುವುದೇ;

(ಇ) ಮೈಸೂರು ನಗರಕ್ಕೆ ಪ್ರತ್ಯೇಕವಾದ ವಾಣಿ ವಿಲಾಸ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ರಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?